# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 213
ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 06.12.2023

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಬಸ್‌ಗಳು ಕಾರ್ಯನಿರ್ವಹಿಸುತ್ತಿವೆ; (ತಾಲ್ಲೂಕುವಾರು ವಿವರ ಒದಗಿಸುವುದು)</td><td>ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ 638 ಬಸ್‌ಗಳು ಕಾರ್ಯಚರಣೆಯಲ್ಲಿದ್ದು, ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ:<br><br>
<table>
<tr><th>ತಾಲೂಕುವಾರು</th><th>ಬಸ್‌ಗಳ ಸಂಖ್ಯೆ</th></tr>
<tr><td>ಬೀದರ ಘಟಕ-1</td><td>115</td></tr>
<tr><td>ಬೀದರ ಘಟಕ-2</td><td>93</td></tr>
<tr><td>ಹುಮನಾಬಾದ್</td><td>116</td></tr>
<tr><td>ಬಸವಕಲ್ಯಾಣ</td><td>106</td></tr>
<tr><td>ಭಾಲ್ಕಿ</td><td>118</td></tr>
<tr><td>ಔರಾದ್</td><td>90</td></tr>
<tr><td>ಕಮಲನಗರ</td><td rowspan="3">ಘಟಕ ಸ್ಥಾಪನೆಯಾಗಿರುವುದಿಲ್ಲ</td></tr>
<tr><td>ಹುಲಸುರ</td></tr>
<tr><td>ಚಿಟಗುಪ್ಪ</td></tr>
<tr><td>ಒಟ್ಟು</td><td>638</td></tr>
</table></td></tr>
<tr><td>ಆ</td><td>ಈ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಸಾಕಷ್ಟು ಬಸ್‌ಗಳು ಹಳೆಯದಾಗಿದ್ದು, ಇದರಿಂದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;</td><td>ಕ.ಕ.ರ.ಸಾ.ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.<br><br>ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br><br>➢ ಪೂರ್ಣ ಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಅನುಮೋದನೆ ನೀಡಲಾಗಿದೆ.<br><br>➢ ಪೂರ್ಣ ಕವಚ ನಿರ್ಮಿತ 93 ನಗರ ಸಾರಿಗೆ ಬಸ್ಸುಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ನಿಗಮದಲ್ಲಿ ಆಶೋಕ್ ಲೈಲ್ಯಾಂಡ್, ಟಾಟಾ ಹಾಗೂ ತತ್ಸಮಾನ ಮಾದರಿಯ ಸಾಮಾನ್ಯ</td></tr>
</table>

| | | |
|---|---|---|
| | | ಬಸ್ಸುಗಳ ಜೀವಮಾನವನ್ನು 9.00 ಲಕ್ಷ ಕಿ.ಮೀ. ಹಾಗೂ ಕರೋನಾ ಹವಾನಿಯಂತ್ರಿತ ಸ್ಲೀಪರ್ ಬಸ್ಸುಗಳ ಜೀವಮಾನವನ್ನು 11.00 ಲಕ್ಷ ಕಿ.ಮೀ.ಗೆ ನಿಗದಿಪಡಿಸಲಾಗಿರುತ್ತದೆ. ಸರ್ಕಾರದ ಆದೇಶದಂತೆ 15 ವರ್ಷ ವಯೋಮಿತಿಯ ವಾಹನಗಳನ್ನು ಕಾರ್ಯಾಚರಣೆಯಿಂದ ಸ್ಥಗಿತಗೊಳಿಸಿ ನಿಷ್ಕ್ರಿಯಗೊಳಿಸಲಾಗುತ್ತಿದೆ.<br><br>ನಿಗದಿತ ಕಿ.ಮೀ. ಕ್ರಮಿಸಿದ ವಾಹನಗಳು ಸುಸ್ಥಿತಿಯಲ್ಲಿದ್ದಲ್ಲಿ ಅವುಗಳನ್ನು ಸಾರಿಗೆ ಪ್ರಾಧಿಕಾರದಿಂದ ರಹದಾರಿ ನವೀಕರಣ ಕೈಗೊಂಡು ಕಾರ್ಯಾ ಚರಣೆಯನ್ನು ಮುಂದುವರೆಸಲಾಗುತ್ತದೆ ಮತ್ತು ಕಾಲಕಾಲಕ್ಕೆ ಅವುಗಳ ಭೌತಿಕ ಮತ್ತು ತಾಂತ್ರಿಕ ಸ್ಥಿತಿಗಳನ್ನು ಪರಿಶೀಲಿಸಿ ಸುಸ್ಥಿತಿಯಲ್ಲಿರುವಂತೆ ಕ್ರಮ ಜರುಗಿಸಲಾಗುತ್ತಿದೆ.<br><br>ಬೀದರ್ ಜಿಲ್ಲೆಯಲ್ಲಿ ಸಂಚರಿಸುತ್ತಿರುವ 230 ಬಸ್‌ಗಳು ನಿಗದಿತ 9.00 ಲಕ್ಷ ಕಿ.ಮೀ. ಕ್ರಮಿಸಿದ್ದು, ಅವುಗಳ ಸ್ಥಿತಿಗತಿಯ ಆಧಾರದ ಮೇಲೆ ಹಂತಹಂತವಾಗಿ ನಿಷ್ಕ್ರಿಯಗೊಳಿಸುವ ಕ್ರಮ ಕೈಗೊಳ್ಳಲಾಗುತ್ತದೆ. |
| ಇ | ಹೊಸ ಬಸ್‌ಗಳ ಬೇಡಿಕೆಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವಾಗ ಹೊಸ ಬಸ್‌ಗಳನ್ನು ನೀಡಲಾಗುವುದು? | ಪ್ರಸಕ್ತ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ 621 ಬಸ್ಸುಗಳನ್ನು ಖರೀದಿಸಿದ್ದು, ಅದರಲ್ಲಿ ಬೀದರ್ ಜಿಲ್ಲೆಗೆ 90 ಹೊಸ ಬಸ್‌ಗಳನ್ನು ಒದಗಿಸಲಾಗಿದೆ. ಮುಂದಿನ ದಿನಗಳಲ್ಲಿ ಅವಶ್ಯಕತೆಗೆ ಅನುಗುಣವಾಗಿ ಹೆಚ್ಚಿನ ಬಸ್ಸುಗಳನ್ನು ಒದಗಿಸುವ ಕುರಿತು ಪರಿಶೀಲಿಸಲಾಗುವುದು. |

ಸಂಖ್ಯೆ: ಟಿಡಿ 176 ಟಿಸಿಕ್ಯೂ 2023

(ರಾಮಲಿಂಗಾರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು